# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 212 |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 12-09-2022 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಹಾಗೂ ಕನ್ನಡ<br>ಮತ್ತು ಸಂಸ್ಕೃತಿ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಶಾಲೆಗಳಲ್ಲಿ ಸ್ಮಾರ್ಟ್ ಕ್ಲಾಸ್ ಯೋಜನೆ ಜಾರಿಗೆ ತರುವಲ್ಲಿ ಸಿಂಗಲ್ ಫೇಸ್ ವಿದ್ಯುತ್ ಸಂಪರ್ಕ ಕಲ್ಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿನ ಸರ್ಕಾರಿ ಶಾಲೆಗಳ ವಿದ್ಯುತ್ ಬೇಡಿಕೆಗನುಸಾರವಾಗಿ ಸಿಂಗಲ್ ಫೇಸ್/ 3 ಫೇಸ್ ವಿದ್ಯುತ್ ಸಂಪರ್ಕ ಕಲ್ಪಿಸಲು ನಿಗಮಗಳ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |
| ಆ) | ಕಡಿಮೆ ವಿದ್ಯುತ್ ಸರಬರಾಜು ಇರುವ ಶಾಲೆಗಳಲ್ಲಿ ಯು.ಪಿ.ಎಸ್. ಮೂಲಕ ವಿದ್ಯುತ್ ಸಂಪರ್ಕದ ಬ್ಯಾಟರಿಗಳ ಸಾಮರ್ಥ್ಯ ಕಡಿಮೆಯಾಗುವ ಹಾಗೂ ಕೆಲವು ಸಂದರ್ಭದಲ್ಲಿ ವಿದ್ಯುತ್ ಅವಘಡಗಳು ಸಂಭವಿಸುವ ಸಾಧ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ "Conditions of Power supply" ಅನ್ವಯ ನಿಯಮಾನುಸಾರ ಸ್ಥಾವರದ ಮಾಪಕದವರೆಗೆ ಮಾತ್ರ ವಿದ್ಯುತ್ ಸಂಪರ್ಕ ಕಲ್ಪಿಸುವ ಹೊಣೆಯು ವಿದ್ಯುತ್ ಸರಬರಾಜು ಕಂಪನಿಗಳದ್ದಾಗಿರುತ್ತದೆ.<br>ಸ್ಥಾವರದ ಆವರಣದಲ್ಲಿ ಅಳವಡಿಸಲಾಗುವ ಯಾವುದೇ ವಿದ್ಯುತ್ ಪರಿಕರಗಳಿಂದ ಅಥವಾ ವೈರಿಂಗ್ ವ್ಯವಸ್ಥೆಯಿಂದ ಸಂಭವಿಸುವ/ ಸಂಭವಿಸಬಹುದಾದಂತಹ ವಿದ್ಯುತ್ ಅವಘಡ ಗಳಿಗೆ ಗ್ರಾಹಕರೇ ಜವಾಬ್ದಾರರಾಗಿರುತ್ತಾರೆ. |
| ಇ) | ಹಾಗಿದ್ದಲ್ಲಿ ಸಿಂಗಲ್ ಫೇಸ್ ವಿದ್ಯುತ್ ಸೌಲಭ್ಯ ಇರುವಂತಹ ಶಾಲೆಗಳಿಗೆ ತ್ರೀ-ಫೇಸ್ ವಿದ್ಯುತ್ ಸೌಲಭ್ಯವನ್ನು ಕಲ್ಪಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ? | ಸಿಂಗಲ್ ಫೇಸ್ ವಿದ್ಯುತ್ ಸೌಲಭ್ಯ ಇರುವಂತಹ ಶಾಲೆಗಳಿಗೆ 3 ಫೇಸ್ ವಿದ್ಯುತ್ ಸೌಲಭ್ಯವನ್ನು ಪಡೆದುಕೊಳ್ಳಲು ಅರ್ಜಿ ಸಲ್ಲಿಸಿದ್ದಲ್ಲಿ ನಿಗಮಗಳ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು. |

ಸಂಖ್ಯೆ: ಎನರ್ಜಿ 180 ಇಬಿಎಸ್ 2022

(ವಿ ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು
ಸಂಸ್ಕೃತಿ ಸಚಿವರು